## 37. ರೂ.5 ಲಕ್ಷ ಕೋಟಿ ಬಂಡವಾಳ ಆಕರ್ಷಣೆಗೆ ಪಣ

ಮುಂದಿನ ಐದು ವರ್ಷದಲ್ಲಿ ರಾಜ್ಯದಲ್ಲಿ ರೂ. ಐದು ಲಕ್ಷ ಕೋಟಿಯ ಬಂಡವಾಳ ಆಕರ್ಷಿಸುವುದು, 20 ಲಕ್ಷ ಮಂದಿಗೆ ಉದ್ಯೋಗಾವಕಾಶ ನೀಡಿಕೆ, ಎರಡು ಮತ್ತು ಮೂರನೇ ಹಂತದ ನಗರದಲ್ಲಿ ಕೈಗಾರಿಕೆಗಳಿಗೆ ಒತ್ತು ನೀಡುವುದು ಸೇರಿದಂತೆ ಸಣ್ಣ ಕೈಗಾರಿಕೆಗಳಿಗೆ ಸುಂಕ, ತೆರಿಗೆ ರಿಯಾಯಿತಿ ವಿನಾಯಿತಿ ನೀಡುವ 'ನೂತನ ಕೈಗಾರಿಕಾ ನೀತಿ 2020-25'ಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನವನ್ನು ಸುದ್ದಿಗೋಷ್ಠಿಯಲ್ಲಿ ತಿಳಿಸಿದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್, ರಾಜ್ಯವು ಸುಧಾರಿತ ಉತ್ಪಾದನೆ, ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಜಾಗತಿಕ ನಾಯಕನಾಗಲು ಮತ್ತು ನಾವೀನ್ಯತೆ, ಸಮತೋಲಿತ ಹಾಗೂ ಸುಸ್ಥಿರ ಅಭಿವೃದ್ಧಿಗೊಳಿಸುವುದು ಪ್ರಮುಖ ಗುರಿಯನ್ನು ಹೊಂದಲಾಗಿದೆ. ಪ್ರಸ್ತುತ ಸರಕುಗಳ ರಫ್ತಿನಲ್ಲಿ ರಾಜ್ಯವು ನಾಲ್ಕನೇ ಸ್ಥಾನದಲ್ಲಿದ್ದು, ಮುಂದಿನ ಐದು ವರ್ಷಗಳಲ್ಲಿ ಅದನ್ನು ಮೂರನೇ ಸ್ಥಾನಕ್ಕೆ ಕೊಂಡೊಯ್ಯುವುದು, ಕೈಗಾರಿಕಾ ಅಭಿವೃದ್ಧಿ ವಾರ್ಷಿಕ ಶೇ.10 ರಷ್ಟು ಇರುವಂತೆ ನೋಡಿಕೊಳ್ಳುವುದು ಉದ್ದೇಶವಾಗಿದೆ ಎಂದರು.

ಬೆಂಗಳೂರಿನಿಂದ ಹೊರಗಡೆ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವ ಉದ್ದೇಶದಿಂದ ಎರಡು ಮತ್ತು ಮೂರನೇ ಹಂತದ ನಗರಗಳಿಗೆ ವಿಸ್ತರಣೆ ಮಾಡುವ ಧ್ಯೇಯವನ್ನು ಹೊಂದಲಾಗಿದೆ. ಕೈಗಾರಿಕೆ ಅಭಿವೃದ್ಧಿಯಲ್ಲಿ ಹಿಂದುಳಿದಿರುವ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಬಂಡವಾಳ ಹೂಡಿಕೆ ಮಾಡಲು ಉತ್ತೇಜಿಸಲಾಗುವುದು. ಕೈಗಾರಿಕೆಗಳ ಸ್ಥಾಪನೆ ಮತ್ತು ಅಭಿವೃದ್ಧಿಗಾಗಿ ಮೂರು ವಲಯಗಳಾಗಿ ವಿಂಗಡಿಸಲಾಗಿದ್ದು, ಮುಖ್ಯಮಂತ್ರಿಗಳ ನೇತೃತ್ವದ ಉನ್ನತ ಮಟ್ಟದ ಸಮಿತಿಯು ವಿಂಗಡಣೆಯನ್ನು ಮಾಡಲಿದೆ. ವಲಯ 1 ಮತ್ತು 2ರಲ್ಲಿ ಹಿಂದುಳಿದ ಜಿಲ್ಲೆ, ತಾಲ್ಲೂಕುಗಳಲ್ಲಿ ಬರಲಿದ್ದು, ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ವಲಯ 3 ರಲ್ಲಿ ಸೇರಿಸಲಾಗಿದೆ. ಬೀದರ್-ಮೈಸೂರು ಕೈಗಾರಿಕಾ ಕಾರಿಡಾರ್‌ನಲ್ಲಿ ರೈಲ್ವೆ ಸಂಪರ್ಕ ಕಲ್ಪಿಸುವ ಕುರಿತು ನೀತಿಯಲ್ಲಿ ಸೇರಿಸಲಾಗುವುದು ಎಂದು ವಿವರಿಸಿದರು.

**ನೂತನ ಕೈಗಾರಿಕಾ ನೀತಿಯಲ್ಲಿನ ಇತರೆ ಅಂಶಗಳು**

- ಶೇ.100ರಷ್ಟು ಗ್ರೂಪ್ 'ಡಿ' ಕಾರ್ಮಿಕರಿಗೆ ಉದ್ಯೋಗ, ಶೇ.70ರಷ್ಟು ಕನ್ನಡಿಗರಿಗೆ ಒಟ್ಟಾರೆ ಆಧಾರದ ಮೇಲೆ ಉದ್ಯೋಗ ಒದಗಿಸುವುದು.
- ವಾರ್ಷಿಕ ವಹಿವಾಟಿನ ಮೇಲೆ ಪ್ರೋತ್ಸಾಹ ನೀಡಿಕೆ.
- ಎಂಎಸ್‌ಎಂಇ.ಗೆ ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕದಲ್ಲಿ ರಿಯಾಯಿತಿ.
- ಭೂ ಪರಿವರ್ತನಾ ಶುಲ್ಕ ಮರುಪಾವತಿ.
- ಎಂಎಸ್‌ಎಂಇ.ಗೆ ವಿದ್ಯುತ್ ತೆರಿಗೆ ವಿನಾಯಿತಿ.
- ತಾಲ್ಲೂಕಿನಲ್ಲಿ ರೂ.100 ಕೋಟಿಗಿಂತ ಹೆಚ್ಚಿನ ಬಂಡವಾಳ ಹೂಡಿದರೆ ಸಹಾಯಧನ.
- ರಫ್ತು ಆಧಾರಿತ ಘಟಕಗಳಿಗೆ ಉತ್ತೇಜನ.
- ಖಾಸಗಿ ಕೈಗಾರಿಕಾ ಪಾರ್ಕ್‌ಗಳನ್ನು ಅಭಿವೃದ್ಧಿಪಡಿಸಲು ರಿಯಾಯಿತಿ ಮತ್ತು ಪ್ರೋತ್ಸಾಹ.

**ವಿಶೇಷ ಹೂಡಿಕೆ ಪ್ರದೇಶ ಕಾಯ್ದೆ ಪ್ರಸ್ತಾಪ:**-100ಕ್ಕಿಂತಲೂ ಹೆಚ್ಚು ಚದರ ಕಿಲೋಮೀಟರ್ ವಿಸ್ತೀರ್ಣವನ್ನು ಹೊಂದಿರುವ ವಿಶೇಷ ಹೂಡಿಕೆ ಪ್ರದೇಶವನ್ನು (ಎಸ್‌ಐಆರ್) ಸ್ಥಾಪಿಸಲು, ಅಭಿವೃದ್ಧಿ ಪಡಿಸಲು ಮತ್ತು ನಿರ್ವಹಿಸಲು ರಾಜ್ಯದಲ್ಲಿ ವಿಶೇಷ ಹೂಡಿಕೆ ಪ್ರದೇಶ ಕಾಯ್ದೆ ಜಾರಿಗೆ ತರಲು ಪ್ರಸ್ತಾಪಿಸಲಾಗಿದೆ. ಈ ಪ್ರದೇಶವನ್ನು ಕೈಗಾರಿಕಾ ಟೌನ್‌ಶಿಪ್ ಎಂದು ಪರಿಗಣಿಸಲಾಗುತ್ತದೆ ಎಂದು ಸಚಿವ ಜಗದೀಶ್ ಶೆಟ್ಟರ್ ತಿಳಿಸಿದರು. ಧಾರವಾಡ, ಗದಗ, ಹಾವೇರಿ ಮತ್ತು ಬೆಳಗಾವಿ ಜಿಲ್ಲೆಯನ್ನೊಳಗೊಂಡ ಧಾರವಾಡ ವಿಶೇಷ ಹೂಡಿಕೆ ಪ್ರದೇಶವನ್ನು ಸ್ಥಾಪಿಸಲಾಗುವುದು. ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಯನ್ನೊಳಗೊಂಡ

ಶಿವಮೊಗ್ಗ ವಿಶೇಷ ಹೂಡಿಕೆ ಪ್ರದೇಶ ಸ್ಥಾಪನೆ ಮತ್ತು ಕಲ್ಯಾಣ ಕರ್ನಾಟಕ ಜಿಲ್ಲೆಗಳನ್ನೊಳಗೊಂಡ ಕಲಬುರಗಿ ವಿಶೇಷ ಹೂಡಿಕೆ ಪ್ರದೇಶ ಸ್ಥಾಪನೆ ಮಾಡಲಾಗುವುದು. ಶಾಸನಬದ್ಧವಾಗಿ ಕಾರ್ಯಗಳನ್ನು ನಿರ್ವಹಿಸಲು ಕರ್ನಾಟಕ ರಾಜ್ಯ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ರಚನೆ ಮಾಡಲಾಗುವುದು ಎಂದು ಹೇಳಿದರು.

ಆಧಾರ:ಕನ್ನಡಪ್ರಭ, ದಿನಾಂಕ:24.07.2020